# ಕರ್ನಾಟಕ ಸರ್ಕಾರ

ಇ-ಕಛೇರಿ ಸಂ: ಇಡಿ 450 ಯುಬಿವಿ 2022

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ:21.09.2022

**ಇಂದ**

ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು

**ಇವರಿಗೆ**

ಕುಲಸಚಿವರು,
ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು.

ಮಾನ್ಯರೇ,

ವಿಷಯ: ಬೆಂಗಳೂರು ವಿಶ್ವವಿದ್ಯಾಲಯದ ಜ್ಯೋತಿ ಇನ್ಸಿಟಿಟ್ಯೂಟ್ ಆಫ್ ಕಾಮರ್ಸ್ & ಮ್ಯಾನೇಜ್‌ಮೆಂಟ್ ಇಲ್ಲಿ 2022-23ನೇ ಸಾಲಿನಿಂದ ಹೊಸದಾಗಿ ವ್ಯಾಸಂಗಕಕ್ರಮಗಳನ್ನು ಆರಂಭಿಸುವ ಬಗ್ಗೆ.

ಉಲ್ಲೇಖ:-
1. ಸರ್ಕಾರದ ಆದೇಶ ಸಂಖ್ಯೆ: ಇಡಿ 29 ಯುಎನ್ಇ 2021, ದಿನಾಂಕ:12.02.2021
2. ತಮ್ಮ ಪತ್ರ ಸಂಖ್ಯೆ: ಎಸಿಎ-3/ಎ3/ಹೊಕೋಪ್ರ/28/2022-23, ದಿನಾಂಕ:29.06.2022
3. ತಮ್ಮ ಪತ್ರ ಸಂಖ್ಯೆ: ಎಸಿಎ-3/ಎ3/ಹೊಕೋಪ್ರ/28/2022-23, ದಿನಾಂಕ:25.08.2022

*****

ಬೆಂಗಳೂರು ವಿಶ್ವವಿದ್ಯಾಲಯದ ಪ್ರಾದೇಶಿಕ ಅಧಿಕಾರ ವ್ಯಾಪ್ತಿಗೆ ಹಾಗೂ ಸಂಯೋಜನೆಗೊಳಪಡುವ, ಜ್ಯೋತಿ ಇನ್ಸಿಟಿಟ್ಯೂಟ್ ಆಫ್ ಕಾಮರ್ಸ್ & ಮ್ಯಾನೇಜ್‌ಮೆಂಟ್, ನಂ:40/5, ತಾತಗುಣಿ, ಕನಕಪುರ ರಸ್ತೆ, ಬೆಂಗಳೂರು-560 082 ಇಲ್ಲಿ ಎಂ.ಕಾಂ. ಸ್ನಾತ್ತಕೋತ್ತರ ಪದವಿ ವ್ಯಾಸಂಗಕ್ರಮವನ್ನು 2022-23ನೇ ಶೈಕ್ಷಣಿಕ ಸಾಲಿನಿಂದ ಹೊಸದಾಗಿ ಆರಂಭಿಸಲು ಸಂಯೋಜಿಸುವುದನ್ನು ನಿರಾಕರಿಸುವ ಬಗ್ಗೆ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000ರ ಪ್ರಕರಣ 59(11) ರಡಿ ಅಗತ್ಯವಾಗುವ ಸರ್ಕಾರದ ಶಿಫಾರಸ್ಸು ಕೋರಿ ಕಾಲೇಜಿನ ಅರ್ಜಿ, ಸ್ಥಳೀಯ ವಿಚಾರಣೆ ಸಮಿತಿಯ ವರದಿ ಹಾಗೂ ಸಿಂಡಿಕೇಟ್/ವಿದ್ಯಾವಿಷಯಕ ಪರಿಷತ್ತುಗಳ ಗೊತ್ತುವಳಿಗಳ ದಾಖಲೆಗಳೊಂದಿಗೆ UUCMS ಆನ್‌ಲೈನ್ ತಂತ್ರಾಶದಲ್ಲಿ ಉಲ್ಲೇಖ(2) ರಲ್ಲಿ ಸಲ್ಲಿಸಿರುವ ಪ್ರಸ್ತಾವನೆಯನ್ನು ಹಾಗೂ ಸೂಕ್ತ ಸ್ಪಷ್ಟೀಕರಣದೊಂದಿಗೆ ಜ್ಯೋತಿ ಇನ್ಸಿಟಿಟ್ಯೂಟ್ ಆಫ್ ಕಾಮರ್ಸ್ & ಮ್ಯಾನೇಜ್‌ಮೆಂಟ್‌ಗೆ 2022-23ನೇ ಶೈಕ್ಷಣಿಕ ಸಾಲಿನಿಂದ ಎಂ.ಕಾಂ. ಸ್ನಾತ್ತಕೋತ್ತರ ಪದವಿ ವ್ಯಾಸಂಗಕ್ರಮದ ಸಂಯೋಜನೆ ನೀಡಲು ಶಿಫಾರಸ್ಸು ಮಾಡಿ ಉಲ್ಲೇಖ(2)ರ ತಮ್ಮ ಪತ್ರದಲ್ಲಿ ಸಲ್ಲಿಸಲಾದ ಮರು ಪ್ರಸ್ತಾವನೆಯನ್ನು ಪರಿಶೀಲಿಸಲಾಗಿದೆ.

ಸ್ಥಳೀಯ ವಿಚಾರಣೆ ಸಮಿತಿಯ ಅವಲೋಕನೆ ಮತ್ತು ತೀರ್ಮಾನಗಳನ್ನು ಪರಿಗಣಿಸಿದ ತರುವಾಯ ಬೆಂಗಳೂರು ವಿಶ್ವವಿದ್ಯಾಲಯದ ಶೈಕ್ಷಣಿಕ ಪರಿಷತ್ ಹಾಗೂ ಸಿಂಡಿಕೇಟ್

--2

ಪ್ರಾಧಿಕಾರಗಳು ಅಂಗೀಕರಿಸಿದ ಗೊತ್ತುವಳಿಗಳನ್ನು ಅನುಸರಿಸಿ ಹಾಗೂ ಶೈಕ್ಷಣಿಕ/ಭೌತಿಕ ಹಾಗೂ ನಾಗರೀಕ ಮೂಲಸೌಕರ್ಯಗಳ ಲಭ್ಯತೆ ಹಾಗೂ ಗುಣಮಟ್ಟದ ಕಾರ್ಯನಿರ್ವಹಣೆಯ ಖಚಿತತೆಗಾಗಿ ಉಲ್ಲೇಖ(1)ರ ಸರ್ಕಾರದ ಆದೇಶದಲ್ಲಿ ನಿಗದಿಪಡಿಸಲಾದ ನಿಯತಾಂಕಗಳ ಹಾಗೂ ಸೂಚ್ಯಾಂಕಗಳ ಪೂರೈಕೆಯನ್ನು ದೃಢಪಡಿಸಿಕೊಂಡು, ಪ್ರಸ್ತಾವನೆಗಳನ್ನು ಷರತ್ತುಗಳಿಗೆ ಒಳಪಟ್ಟು ಪರಿಗಣಿಸಲಾಗಿದೆ.

ತತ್ಪರಿಣಾಮವಾಗಿ, ಜ್ಯೋತಿ ಇನ್ಸಿಟಿಟ್ಯೂಟ್ ಆಫ್ ಕಾಮರ್ಸ್ & ಮ್ಯಾನೇಜ್‌ಮೆಂಟ್, ನಂ:40/5, ತಾತಗುಣಿ, ಕನಕಪುರ ರಸ್ತೆ, ಬೆಂಗಳೂರು-560 082 ಇಲ್ಲಿ ಎಂ.ಕಾಂ. ಸ್ನಾತ್ತಕೋತ್ತರ ಪದವಿ ವ್ಯಾಸಂಗಕ್ರಮವನ್ನು 2022-23ನೇ ಸೈಕ್ಷಣಿಕ ಸಾಲಿನಿಂದ ಕೆಳಕಂಡಂತೆ ಹೊಸದಾಗಿ ಸಂಯೋಜಿಸುವ ಕುರಿತು ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000ರ ಪ್ರಕರಣ 59(11)ರಡಿ ಪ್ರದತ್ತವಾದ ಅಧಿಕಾರ ಚಲಾಯಿಸಿ ಶಿಫಾರಸ್ಸು ಮಾಡಲಾಗಿದೆ ಎಂದು ತಿಳಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

| ವ್ಯಾಸಂಗಕ್ರಮ | ವಿಷಯಸಮೂಹ | ವಿದ್ಯಾರ್ಥಿ ಪ್ರಮಾಣ |
|---|---|---|
| ಎಂ.ಕಾಂ | ವಿ.ವಿ.ಪರಿನಿಯಮಗಳಂತೆ | 40(ನಲವತ್ತು) |

**ವಿದ್ಯಾರ್ಥಿ ತಲಾವಾರು ಗ್ರಂಥಾಲಯ ಪ್ರದೇಶ ಲಭ್ಯತೆಯ ಹಾಗೂ ಯುಜಿಸಿ ವಿನಿಯಮಗಳನ್ವಯ ಅಗತ್ಯವಾಗುವ ಮೂಲಧನ ನಿರ್ವಹಣೆ ಹಾಗೂ ಮುಚ್ಚಳಿಕೆ ಕಾರ್ಯಗತಗೊಳಿಸುವಿಕೆ ನಿಯತಾಂಕಗಳನ್ನು 6 ತಿಂಗಳುಗಳ ಒಳಗಾಗಿ ಪೂರೈಸತಕ್ಕದ್ದು. ತಪ್ಪಿದಲ್ಲಿ ಹೊಸ ಕೋರ್ಸ್ ಸಂಯೋಜನೆಗ ಈ ಪತ್ರದಲ್ಲಿ ಮಾಡಲಾಗಿರುವ ಶಿಫಾರಸ್ಸು ಸ್ವಯಂಚಾಲಿತವಾಗಿ ರದ್ದುಗೊಳ್ಳುತ್ತದೆ.**

**ಹೆಚ್ಚುವರಿಯಾಗಿ PhD, NET/SLET ಅರ್ಹತೆಯುಳ್ಳ ಬೋಧಕರನ್ನು 3 ತಿಂಗಳ ಒಳಗಾಗಿ ನೇಮಿಸಿಕೊಳ್ಳತಕ್ಕದ್ದು ಹಾಗೂ ಅರ್ಹ ಬೋಧಕರಿಗೆ ಯುಜಿಸಿ ವೇತನ ಶ್ರೇಣಿಯಲ್ಲಿ ವೇತನ ಪಾವತಿಸತಕ್ಕದ್ದು. ಹಿಂದಿನ ವರ್ಷದ ಸ್ಥಳೀಯ ವಿಚಾರಣೆ ಸಮಿತಿಯಲ್ಲಿನ ಎಲ್ಲಾ ಷರತ್ತುಗಳನ್ನು 3 ತಿಂಗಳ ಒಳಗಾಗಿ ಪೂರೈಸತಕ್ಕದ್ದು. 2022-23ನೇ ಸಾಲಿನ ಸ್ಥಳೀಯ ವಿಚಾರಣೆ ಸಮಿತಿಯಿಂದ ಅವಲೋಕಿಸಲಾಗಿರುವಂತೆ ನೇಮಕಾತಿಗಳಲ್ಲಿ ಮೀಸಲಾತಿ ರೋಷ್ಟರ್ ಪಾಲಿಸತಕ್ಕದ್ದು ಹಾಗೂ ಗ್ರಂಥಾಲಯದಲ್ಲಿ ಹೆಚ್ಚುವರಿಯಾಗಿ ಪುಸ್ತಕಗಳನ್ನು ಸಲ್ಲಿಸತಕ್ಕದ್ದು. ತಪ್ಪಿದಲ್ಲಿ, 2023-24ನೇ ಸಾಲಿನಿಂದ ಕಾಲೇಜಿನ ಸಂಯೋಜನೆಯನ್ನು ರದ್ದುಪಡಿಸಲು ಬೆಂಗಳೂರು ವಿಶ್ವವಿದ್ಯಾಲಯಕ್ಕೆ ಸೂಚಿಸಲಾಗಿದೆ**

ಜ್ಯೋತಿ ಇನ್ಸಿಟಿಟ್ಯೂಟ್ ಆಫ್ ಕಾಮರ್ಸ್ & ಮ್ಯಾನೇಜ್‌ಮೆಂಟ್‌ಗೆ 2022-23ನೇ ಶೈಕ್ಷಣಿಕ ಸಾಲಿನಿಂದ ಮೇಲ್ಕಂಡಂತೆ ಹೊಸ ಕೋರ್ಸು ಸಂಯೋಜನೆ ನೀಡುವುದು ಪೂರ್ವಪ್ರಸ್ತಾಪಿತ ಷರತ್ತುಗಳು ಸೇರಿದಂತೆ ಈ ಕೆಳಕಂಡ ಎಲ್ಲಾ ಷರತ್ತುಗಳನ್ನು ಪಾಲಿಸುವ ನಿಬಂಧನೆಗೆ ಒಳಪಟ್ಟಿರುತ್ತದೆ.

1 ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಕಾಲೇಜಿನ ಮೇಲ್ಕಂಡ ಕೋರ್ಸಿಗೆ ಸರ್ಕಾರವು ಯಾವುದೇ

ಅನುದಾನವನ್ನು ಮಂಜೂರು ಮಾಡುವುದಿಲ್ಲ, ಅದನ್ನು ಶಾಶ್ವತ ಅನುದಾನರಹಿತ ಕೋರ್ಸೆಂದು ಪರಿಗಣಿಸತಕ್ಕದ್ದು;

2 ಮೇಲ್ಕಂಡ ಕಾಲೇಜು ವಿಶ್ವವಿದ್ಯಾಲಯದ ನಿಯಮಾವಳಿಗಳ ಉಪಬಂಧಗಳನ್ನು ತಪ್ಪದೇ ಪಾಲಿಸತಕ್ಕದ್ದು;

3 ನಿಗದಿತ ವಿದ್ಯಾರ್ಥಿ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ವಿದ್ಯಾರ್ಥಿಗಳ ಪ್ರವೇಶ ಮಾಡತಕ್ಕದ್ದಲ್ಲ;

4 ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾಲಯದ ಅನುಶಾಸನ, ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು;

5 ಸ್ಥಳೀಯ ವಿಚಾರಣಾ ಸಮಿತಿ ವಿಧಿಸಿರುವ ಪ್ರತಿಯೊಂದು ಷರತ್ತನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು

6 ಕಾಲೇಜು/ಆಡಳಿತ ಮಂಡಳಿಯು ಶೇ.50 ರಷ್ಟು ವಿಶ್ವವಿದ್ಯಾಲಯ ಕೋಟಾವನ್ನು (ಎಲ್ಲಿ ಅನ್ವಯವಾಗುತ್ತದೆಯೋ ಅಲ್ಲಿ) ವಿಶ್ವವಿದ್ಯಾಲಯದ ನಿಯಮಾವಳಿಯ ಪ್ರಕಾರ ನಿಗದಿಪಡಿಸತಕ್ಕದ್ದು; ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿಗದಿಪಡಿಸುವ ಶುಲ್ಕವನ್ನು ಮಾತ್ರ ವಸೂಲು ಮಾಡತಕ್ಕದ್ದು, ವಿಶ್ವವಿದ್ಯಾಲಯವು ನಿಗದಿಪಡಿಸಿದ ಶುಲ್ಕ/ಮೊತ್ತಕ್ಕಿಂತ ಬೇರೆ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ;

7 ದಿನಾಂಕ: 13-8-1997 ರಂದು ವಿಶಾಖ v/s ರಾಜಸ್ಥಾನ ಸರ್ಕಾರ ಮೊಕದ್ದಮ್ಮೆಯಲ್ಲಿ ಸುಪ್ರೀಂ ಕೋರ್ಟು ನೀಡಿರುವ ತೀರ್ಪಿನನುಸಾರ ಯಾವುದೇ ವ್ಯಕ್ತಿ/ವಿದ್ಯಾರ್ಥಿಯು ಗಲಭೆಯನ್ನು ಉಂಟು ಮಾಡುವುದಾಗಲೀ ಅಥವಾ ಕಾಲೇಜಿನಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ ನೀಡಿದಲ್ಲಿ ಅದು ಸಂಜ್ಞೇಯ ಅಪರಾಧ (Cognizable Offence) ಎಂದು ಪರಿಗಣಿಸಿ, ಈ ತರಹದ ಚಟುವಟಿಕೆಗಳಲ್ಲಿ ತೊಡಗಿದ ವಿದ್ಯಾರ್ಥಿ/ವ್ಯಕ್ತಿಯ ಪ್ರವೇಶವನ್ನು ರದ್ದುಪಡಿಸುವುದು; ಮತ್ತು ಆ ವ್ಯಕ್ತಿ/ವಿದ್ಯಾರ್ಥಿಯ ಮೇಲೆ ಕಾನೂನು ರೀತ್ಯಾ ಕ್ರಮ ಜರುಗಿಸತಕ್ಕದ್ದು; ಮುಂದುವರೆದು, ಕಾಲೇಜು/ಆಡಳಿತ ಮಂಡಳಿಯು ಸುಪ್ರೀಂ ಕೋರ್ಟಿನ ಆದೇಶದನ್ವಯ ಒಂದು ದೂರು ಸಮಿತಿಯನ್ನು ರಚಿಸಿ; ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು;

8 ಕಾಲೇಜು ವಿದ್ಯಾರ್ಥಿಗಳ ಬೆಳವಣಿಗೆಗಾಗಿ ಉತ್ತಮ ಕೋರ್ಸನ್ನು ನಡೆಸತಕ್ಕದ್ದು; ಕಾಲೇಜಿನ ಪ್ರಾಂಶುಪಾಲರು/ಆಡಳಿತ ಮಂಡಲಿಯು ವಿದ್ಯಾರ್ಥಿ/ಬೋಧಕ ವೃಂದವನ್ನು ಸೌಹಾರ್ದಯುತವಾಗಿ ಕಾಣತಕ್ಕದ್ದು;

9 ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯ ಅಂಕಪಟ್ಟಿ ಅಥವಾ ಇತರೆ ದಾಖಲಾತಿಗಳನ್ನು ಸದರಿ ವಿದ್ಯಾರ್ಥಿಯ ಪ್ರವೇಶವನ್ನು ವಿಶ್ವವಿದ್ಯಾಲಯವು ಅನುಮೋದಿಸುವವರೆಗೆ ಅಥವಾ 6 ತಿಂಗಳ ಅವಧಿಗೆ ಮೀರಿ, ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಅನಗತ್ಯವಾಗಿ ತಡೆಹಿಡಿಯತಕ್ಕದ್ದಲ್ಲ;

10 ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯು ವರ್ಗಾವಣೆ ಪ್ರಮಾಣ ಪತ್ರ ಬೇಕೆಂದು ಅಪೇಕ್ಷಿಸಿ ಅರ್ಜಿ ಸಲ್ಲಿಸಿದಲ್ಲಿ, ಅದನ್ನು ವಿತರಿಸುವಾಗ ವಿದ್ಯಾರ್ಥಿಗೆ ತೊಂದರೆ

ನೀಡತಕ್ಕದ್ದಲ್ಲ; ಹಾಗೂ ಅವರಿಂದ ಬಾಕಿ ಉಳಿದಿರುವ ಶೈಕ್ಷಣಿಕ ವರ್ಷ/ಸೆಮಿಸ್ಟರ್ ಅವಧಿಗೆ ಮಾತ್ರ ಬೋಧಕ ಶುಲ್ಕವನ್ನು ಪಡೆಯತಕ್ಕದ್ದು ಹಾಗೂ ಬೇರೆ ಯಾವುದೇ ಮೊತ್ತವನ್ನು ಪಡೆಯತಕ್ಕದ್ದಲ್ಲ;

11 ಕ್ಯಾಪಿಟೇಷನ್ ಶುಲ್ಕವನ್ನು ಯಾವುದೇ ರೂಪದಲ್ಲೂ ಪಡೆಯತಕ್ಕದ್ದಲ್ಲ;

12 ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

ತಮ್ಮ ನಂಬುಗೆಯ

(ಶೀತಲ್ ಎಂ. ಹಿರೇಮಠ)
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ)
ಉನ್ನತ ಶಿಕ್ಷಣ ಇಲಾಖೆ(ವಿಶ್ವವಿದ್ಯಾಲಯಗಳು-1)

ಪ್ರತಿ:

1) ಕಾಲೇಜು ಶಿಕ್ಷಣ ಆಯುಕ್ತರು/ನಿರ್ದೇಶಕರು, ಬೆಂಗಳೂರು-560 001
2) ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು
3)ಪ್ರಾಂಶುಪಾಲರು, ಜ್ಯೋತಿ ಇನ್ಸಿಟಿಟ್ಯೂಟ್ ಆಫ್ ಕಾಮರ್ಸ್ & ಮ್ಯಾನೇಜ್‌ಮೆಂಟ್, ನಂ:40/5, ತಾತಗುಣಿ, ಕನಕಪುರ ರಸ್ತೆ, ಬೆಂಗಳೂರು-560 082
4)ಇ-ಸಮನ್ವಯಾಧಿಕಾರಿ, ಉನ್ನತ ಶಿಕ್ಷಣ ಇಲಾಖೆ ಇವರಿಗೆ(ಉನ್ನತ ಶಿಕ್ಷಣ ಇಲಾಖೆಯ ಜಾಲತಾಣದಲ್ಲಿ ಪ್ರಕಟಿಸಲು)